# ಕರ್ನಾಟಕ ಸರ್ಕಾರ

ಸಂಖ್ಯೆ: ಎನರ್ಜಿ/243/ಪಿಎಸ್‌ಆರ್/2024
ಲಗತ್ತು:

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 10.07.2024

**ಇವರಿಂದ:-**

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಇಂಧನ ಇಲಾಖೆ,
ಬೆಂಗಳೂರು.

**ಇವರಿಗೆ:-**

ವ್ಯವಸ್ಥಾಪಕ ನಿರ್ದೇಶಕರು,
ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಬೆಂಗಳೂರು.
ಮಂಗಳೂರು ವಿದ್ಯುತ್ ಸರಬರಾಜು ಕಂಪನಿ, ಮಂಗಳೂರು.
ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ.
ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿ, ಗುಲ್ಬರ್ಗ.
ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಮೈಸೂರು.
ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘ ನಿಯಮಿತ, ಹುಕ್ಕೇರಿ.

**ಮಾನ್ಯರೆ,**

**ವಿಷಯ:** ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಉಚಿತ ವಿದ್ಯುತ್ ಸೌಲಭ್ಯ ಒದಗಿಸುವ ಬಗ್ಗೆ.

**ಉಲ್ಲೇಖ:** ಶಾಲಾ ಶಿಕ್ಷಣ ಮತ್ತು ಸಾಕ್ಷರತ ಇಲಾಖೆ ರವರ ಸರ್ಕಾರಿ ಆದೇಶ ಸಂಖ್ಯೆ: ಇಪಿ 9 ಎಂಸಿಡಿ 2024, ಬೆಂಗಳೂರು ದಿನಾಂಕ: 27.06.2024.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಉಚಿತ ವಿದ್ಯುತ್ ಸೌಲಭ್ಯ ಒದಗಿಸುವ ಸಂಬಂಧ, ಶಾಲಾ ಶಿಕ್ಷಣ ಮತ್ತು ಸಾಕ್ಷರತ ಇಲಾಖೆಯು ಹೊರಡಿಸಿರುವ ಸರ್ಕಾರಿ ಆದೇಶ ಸಂಖ್ಯೆ: ಇಪಿ 9 ಎಂಸಿಡಿ 2024, ಬೆಂಗಳೂರು ದಿನಾಂಕ: 27.06.2024 ರ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ.

ಸದರಿ ಆದೇಶದಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಉಚಿತ ವಿದ್ಯುತ್ ಮತ್ತು ನೀರಿನ ಸೌಲಭ್ಯಗಳನ್ನು ಒದಗಿಸಲು ಸಂಬಂಧಪಟ್ಟ ವಿದ್ಯುತ್ ನಿಗಮಗಳಿಗೆ 2024-25ನೇ ಸಾಲಿನಲ್ಲಿ ಸರ್ಕಾರಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳ ಮಾಸಿಕ ಬಿಲ್ಲುಗಳ ಬಳಕೆ ಮೊತ್ತವನ್ನು ನಮೂದಿಸಿ ಶೂನ್ಯ ಬಿಲ್ಲುಗಳನ್ನು ನೀಡಲು ಹಾಗೂ ಬಿಲ್ಲುಗಳ ಮೊತ್ತವನ್ನು ತ್ರೈಮಾಸಿಕವಾರು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ನೀಡಿ ಮರುಪಾವತಿ ಪಡೆಯುವ ನಿಟ್ಟಿನಲ್ಲಿ ಸೂಕ್ತ ನಿರ್ದೇಶನ / ಆದೇಶವನ್ನು ನೀಡಲು ತಿಳಿಸಲಾಗಿರುತ್ತದೆ

ಆದ್ದರಿಂದ, 2024-25 ನೇ ಸಾಲಿನಲ್ಲಿ ಈಗಾಗಲೇ ಮೂರು ತಿಂಗಳು ಗತಿಸಿರುವುದರಿಂದ ಹಾಗೂ ಜುಲೈ ಮಾಹೆಯಲ್ಲಿ ಕೆಲವು ಸ್ಥಾವರಗಳ ವಿದ್ಯುತ್ ಬಳಕೆಯ ಬಿಲ್ಲುಗಳನ್ನು ನೀಡಿರುವ ಹಿನ್ನೆಲೆಯಲ್ಲಿ, ಎಲ್ಲಾ ಸರ್ಕಾರಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಉಚಿತ ವಿದ್ಯುತ್ ಸೌಲಭ್ಯವನ್ನು ಒದಗಿಸುವ ನಿಟ್ಟಿನಲ್ಲಿ ಈ ಕೆಳಕಂಡ ಪ್ರಕ್ರಿಯೆಯೊಂದಿಗೆ ಅನುಷ್ಠಾನಗೊಳಿಸಲು ತಿಳಿಸಲಾಗಿದೆ.

1) ದಿನಾಂಕ: 01.08.2024 ರಿಂದ ಜಾರಿಗೆ ಬರುವಂತೆ ಎಲ್ಲಾ ಸರ್ಕಾರಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳ ವಿದ್ಯುತ್ ಬಳಕೆಯ ಬಿಲ್ಲುಗಳನ್ನು ತಂತ್ರಾಂಶದಲ್ಲಿ ಸೂಕ್ತವಾಗಿ ಅಳವಡಿಸಿ ಶೂನ್ಯ ಬಿಲ್ಲುಗಳನ್ನು ನೀಡಲು ವ್ಯವಸ್ಥೆಗೊಳಿಸುವುದು.
2) ದಿನಾಂಕ: 01.04.2024 ರಿಂದ 30.06.2024 (ತ್ರೈಮಾಸಿಕವಾರು) ರವರೆಗಿನ ಸರ್ಕಾರಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳ ವಿದ್ಯುತ್ ಬೇಡಿಕೆಯನ್ನು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ನೀಡಿ ಪಾವತಿಯನ್ನು ಪಡೆಯುವುದು.
3) ಪ್ರತಿ ಆರ್ಥಿಕ ವರ್ಷದಲ್ಲಿ ತ್ರೈಮಾಸಿಕವಾರು (ತ್ರೈಮಾಸಿಕದ ನಂತರದ ಮಾಹೆಯಲ್ಲಿ) ಎಲ್ಲಾ ಸರ್ಕಾರಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳ ವಿದ್ಯುತ್ ಶುಲ್ಕದ ಬೇಡಿಕೆಯನ್ನು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ನೀಡಿ ಪಾವತಿಯನ್ನು ಪಡೆಯುವುದು.
4) ಸರ್ಕಾರಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜು ವಿದ್ಯುತ್ ಸ್ಥಾವರಗಳಿಗೆ ದಿನಾಂಕ: 01.04.2024 ರಿಂದ 31.07.2024 ರವರೆಗಿನ ಈಗಾಗಲೇ ಬಿಲ್ಲು ವಿತರಿಸಿರುವ ಪ್ರಕರಣಗಳಲ್ಲಿ ದಿನಾಂಕ: 01.04.2024 ರಿಂದ ಉಂಟಾಗಿರುವ ಬೇಡಿಕೆ ಮೊತ್ತದ ಮೇಲೆ ಆಕರಣೆಯಾಗಿರುವ ಬಡ್ಡಿಯ ಮೊತ್ತವನ್ನು ಲೆಕ್ಕಪತ್ರಗಳಿಂದ ತೊಡೆದು ಹಾಕಲು ಕ್ರಮವಹಿಸುವುದು.
5) ದಿನಾಂಕ: 31.03.2024 ರವರೆಗಿನ ವಿದ್ಯುತ್ ಬಾಕಿ ಮತ್ತು ಆಕರಣೆಯಾಗಿರುವ ಬಡ್ಡಿ ಮೊತ್ತವನ್ನು ಸಂಬಂಧಿಸಿದ ಸರ್ಕಾರಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಿಂದ ವಸೂಲಿ ಮಾಡಲು ಕ್ರಮವಹಿಸುವುದು.

ಎಲ್ಲಾ ಸರ್ಕಾರಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಉಚಿತ ವಿದ್ಯುತ್ ಸೌಲಭ್ಯದಡಿ ಶೂನ್ಯ ಬಿಲ್ಲನ್ನು ನೀಡುವ ಬಗ್ಗೆ ಹಾಗೂ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಂದ ತ್ರೈಮಾಸಿಕವಾಗಿ ಬೇಡಿಕೆ ಮೊತ್ತವನ್ನು ಪಡೆಯುವ ನಿಟ್ಟಿನಲ್ಲಿ ಸೂಕ್ತ ಕ್ರಮವಹಿಸುವಂತೆ ತಮ್ಮನ್ನು ಕೋರಲು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ,

(ವಿನೋದ್ ಕುಮಾರ್ ಡಿ.ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ.

**ಪ್ರತಿಯನ್ನು ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.**

ಪ್ರಧಾನ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ. ಬಹುಮಹಡಿಗಳ ಕಟ್ಟಡ, ಬೆಂಗಳೂರು – ತಮ್ಮ ಇಲಾಖೆ ವ್ಯಾಪ್ತಿಗೊಳಪಡುವ ಸರ್ಕಾರಿ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳ ಸಂಬಂಧಿಸಿದ ಅಧಿಕಾರಿಗಳು ದಿನಾಂಕ: 20.07.2024 ರೊಳಗಾಗಿ ವಿದ್ಯುತ್ ಸ್ಥಾವರಗಳ ಮಾಹಿತಿಯನ್ನು (ಆರ್.ಆರ್ ಸಂಖ್ಯೆ ಮತ್ತು ಬಳಕೆದಾರರ ಐ.ಡಿ ಸಂಖ್ಯೆ) ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಗಳ ಉಪ–ವಿಭಾಗ / ಶಾಖಾ ಕಛೇರಿಯಲ್ಲಿ ನೀಡುವ ವ್ಯವಸ್ಥೆ ಮಾಡುವುದು.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** 2024-25ನೇ ಸಾಲಿನ ಆಯವ್ಯಯ ಘೋಷಿತ ಕಂಡಿಕೆ 102 ರನ್ವಯ ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಉಚಿತ ವಿದ್ಯುತ್ ಮತ್ತು ನೀರಿನ ಸೌಲಭ್ಯ ಯೋಜನೆಯನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡುವ ಕುರಿತು.

**ಓದಲಾಗಿದೆ :**

1. ಸರ್ಕಾರದ ಆದೇಶ ಸಂಖ್ಯೆ: ಇಪಿ 19 ಎಂಸಿಡಿ 2023, ದಿನಾಂಕ: 15.12.2023.
2. ಸರ್ಕಾರದ ಪತ್ರ ಸಂಖ್ಯೆ: ಇಪಿ 19 ಎಂಸಿಡಿ 2023, ದಿನಾಂಕ: 01.06.2024.
3. 2024-25ನೇ ಸಾಲಿನ ಆಯವ್ಯಯ ಕಂಡಿಕೆ ಸಂಖ್ಯೆ: 102.
4. ಅಯುಕ್ತರು, ಶಾಲಾ ಶಿಕ್ಷಣ ಇಲಾಖೆ ಇವರ ಪ್ರಸ್ತಾವನೆ ಸಂಖ್ಯೆ: DPI-CPI0PPLN5/7/2023(E-1144690) ದಿನಾಂಕ: 24.05.2024.
5. ನಿರ್ದೇಶಕರು ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ) ಇವರ ಪ್ರಸ್ತಾವನೆ ದಿನಾಂಕ: 13.05.2024.

******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳು ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಉಚಿತ ವಿದ್ಯುತ್ ಮತ್ತು ನೀರಿನ ಸೌಲಭ್ಯವನ್ನು ಒದಗಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (2)ರಲ್ಲಿ 2023-24ನೇ ಸಾಲಿಗೆ ಸಂಬಂಧಿಸಿದ ವಿದ್ಯುತ್ ಬಾಕಿ ಬಿಲ್ಲುಗಳನ್ನು ಸಂಬಂಧಪಟ್ಟ ಶಾಲಾ ಕಾಲೇಜುಗಳಿಗೆ ಬಿಡುಗಡೆ ಮಾಡಲಾಗಿರುವ ಅನುದಾನದಿಂದಲೇ ಪಾವತಿಸುವಂತೆ ಅಯುಕ್ತರು, ಶಾಲಾ ಶಿಕ್ಷಣ ಇಲಾಖೆ ಮತ್ತು ನಿರ್ದೇಶಕರು ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ) ಇವರುಗಳಿಗೆ ತಿಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (3)ರಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರು ವಿಧಾನ ಮಂಡಲದಲ್ಲಿ ಮಂಡಿಸಿರುವ 2024-25ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಗೆ ಸಂಬಂಧಿಸಿದಂತೆ ಕಂಡಿಕೆ 102 ರಲ್ಲಿ ಈ ಕೆಳಕಂಡಂತೆ ಘೋಷಿಸಿರುತ್ತಾರೆ;

"ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಉಚಿತ ವಿದ್ಯುತ್ ಮತ್ತು ನೀರಿನ ಸೌಲಭ್ಯವನ್ನು ಒದಗಿಸಲು ನಮ್ಮ ಸರ್ಕಾರವು ನಿರ್ಧರಿಸಿದೆ. ಇದರಿಂದ ರಾಜ್ಯದ 46,829 ಸರ್ಕಾರಿ ಶಾಲೆಗಳು ಮತ್ತು 1,234 ಪದವಿ ಪೂರ್ವ ಕಾಲೇಜುಗಳಿಗೆ ಅನುಕೂಲವಾಗಲಿದೆ. ಈ ಉದ್ದೇಶಕ್ಕಾಗಿ ಒಟ್ಟು 25 ಕೋಟಿ ರೂ. ವೆಚ್ಚವಾಗಲಿದೆ".

ಮೇಲೆ ಓದಲಾದ ಕ್ರಮಾಂಕ (4)ರಲ್ಲಿ 2024-25ನೇ ಆರ್ಥಿಕ ಸಾಲಿಗೆ ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳಿಗೆ ಉಚಿತವಾಗಿ ವಿದ್ಯುತ್ ಮತ್ತು ನೀರಿನ ಸೌಲಭ್ಯಗಳನ್ನು ಒದಗಿಸಲು (ರೂ.22.97 ಕೋಟಿ ವಿದ್ಯುತ್ ಸೌಲಭ್ಯಕ್ಕಾಗಿ ಹಾಗೂ ರೂ.2.88 ಕೋಟಿ ನೀರಿನ ಸೌಲಭ್ಯಕ್ಕಾಗಿ) ಒಟ್ಟು ರೂ.25.85 ಕೋಟಿಗಳ ಅನುದಾನವನ್ನು ಒದಗಿಸುವಂತೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (5)ರಲ್ಲಿ 2024-25ನೇ ಆರ್ಥಿಕ ಸಾಲಿಗೆ ರಾಜ್ಯದ 1234 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಉಚಿತವಾಗಿ ವಿದ್ಯುತ್ ಮತ್ತು ನೀರಿನ ಸೌಲಭ್ಯಗಳನ್ನು ಒದಗಿಸಲು (ರೂ.2.64 ಕೋಟಿ ವಿದ್ಯುತ್ ಸೌಲಭ್ಯಕ್ಕಾಗಿ ಹಾಗೂ ರೂ.0.70 ಕೋಟಿ ನೀರಿನ ಸೌಲಭ್ಯಕ್ಕಾಗಿ) ಒಟ್ಟು ರೂ.3.34 ಕೋಟಿಗಳ ಅನುದಾನವನ್ನು ಒದಗಿಸುವಂತೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ.

ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಪಿ 9 ಎಂಸಿಡಿ 2024, ಬೆಂಗಳೂರು ದಿನಾಂಕ:27.06.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ 46,829 ಸರ್ಕಾರಿ ಶಾಲೆಗಳು ಮತ್ತು 1234 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ರೂ.29.19 ಕೋಟಿ ಅಂದಾಜು ಮೊತ್ತದಲ್ಲಿ (ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ರೂ.25.85 ಕೋಟಿ ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ರೂ.3.34 ಕೋಟಿ) ಲೆಕ್ಕಶೀರ್ಷಿಕೆ 2201-053-0-02-ಶಾಲಾ ಕಟ್ಟಡಗಳ ನಿರ್ವಹಣೆ ಉಪಶೀರ್ಷಿಕೆ 058-ವಿದ್ಯುತ್ ಮತ್ತು ನೀರಿನ ವೆಚ್ಚದಡಿಯಲ್ಲಿ ಈ ಉದ್ದೇಶಕ್ಕಾಗಿ ರೂ.10.00 ಕೋಟಿಗಳನ್ನು ಒದಗಿಸಲಾಗಿರುತ್ತದೆ. ಲಭ್ಯವಿರುವ ಅನುದಾನದಲ್ಲಿ ಸಂಬಂಧಿಸಿದ ಇಲಾಖೆ / ನಿಗಮ / ಮಂಡಳಿಗಳಿಗೆ ನೇರವಾಗಿ ಭರಿಸುವ ಮೂಲಕ ಉಚಿತ ವಿದ್ಯುತ್ ಮತ್ತು ನೀರಿನ ಸೌಲಭ್ಯವನ್ನು ಒದಗಿಸಲು ಅಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಇವರಿಗೆ ಈ ಕೆಳಕಂಡ ಷರತ್ತುಗಳನ್ನು ಅನ್ವಯಿಸಿ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಉಚಿತ ವಿದ್ಯುತ್ ಮತ್ತು ನೀರಿನ ಸೌಲಭ್ಯಗಳನ್ನು ರಾಜ್ಯದ ಎಲ್ಲಾ ಸರ್ಕಾರಿ ಶಾಲಾ-ಕಾಲೇಜುಗಳಿಗೆ ಒದಗಿಸಲು, ಇಂಧನ ಇಲಾಖೆ ಮತ್ತು ನಗರಾಭಿವೃದ್ಧಿ ಇಲಾಖೆಗಳು ಸಂಬಂಧಪಟ್ಟ ವಿದ್ಯುತ್ ನಿಗಮಗಳು / ಜಲ ಮಂಡಳಿಗಳಿಗೆ 2024-25ನೇ ಸಾಲಿನಲ್ಲಿ ಸರ್ಕಾರಿ ಶಾಲಾ-ಕಾಲೇಜುಗಳ ಮಾಸಿಕ ಬಿಲ್ಲುಗಳಲ್ಲಿ ಬಳಕೆ

ಮೊತ್ತವನ್ನು ನಮೂದಿಸಿ ಶೂನ್ಯ ಬಿಲ್ಲುಗಳನ್ನು ನೀಡುವಂತೆ ಹಾಗೂ ಬಿಲ್ಲುಗಳ ಮೊತ್ತವನ್ನು ತ್ರೈಮಾಸಿಕವಾರು ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು, ಇವರಿಗೆ ಸಲ್ಲಿಸಿ ಮರುಪಾವತಿ ಪಡೆದುಕೊಳ್ಳುವಂತೆ ಸೂಕ್ತ ನಿರ್ದೇಶನ/ಆದೇಶವನ್ನು ನೀಡುವುದು.

ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಇವರು ಪದವಿ ಪೂರ್ವ ಕಾಲೇಜುಗಳ ವಿದ್ಯುತ್ ಮತ್ತು ನೀರಿನ ಬಿಲ್ಲುಗಳ ಮರುಪಾವತಿ ಮಾಡುವ ಸಂದರ್ಭದಲ್ಲಿ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ) ಇವರ ದೃಢೀಕರಣ ಪಡೆಯತಕ್ಕದ್ದು.

ಉಚಿತ ವಿದ್ಯುತ್ ಮತ್ತು ನೀರಿನ ಸೌಲಭ್ಯವನ್ನು ಬಳಸಿಕೊಂಡು ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣಕ್ಕೆ ಅಗತ್ಯ ವ್ಯವಸ್ಥೆಯನ್ನು ಮಾಡಲು ಹಾಗೂ ಶಾಲಾ ಕಾಲೇಜುಗಳು ವಿದ್ಯುತ್ ಮತ್ತು ನೀರನ್ನು ಮಿತವಾಗಿ ಅಗತ್ಯಕ್ಕೆ ತಕ್ಕಂತೆ ಮಾತ್ರ ಬಳಕೆ ಮಾಡುವಂತೆ ಹಾಗೂ ಯಾವುದೇ ರೀತಿಯಲ್ಲಿ ಸಂಪನ್ಮೂಲಗಳು ಪೋಲಾಗದಂತೆ ಎಚ್ಚರ ವಹಿಸುವಂತೆ ತಿಳಿಸಿ ಅಗತ್ಯ ಸುತ್ತೋಲೆಯನ್ನು ನೀಡಿ ಮೇಲ್ವಿಚಾರಣೆ ನಡೆಸತಕ್ಕದ್ದು.

ಉಚಿತ ವಿದ್ಯುತ್ ಮತ್ತು ನೀರಿನ ಸೌಲಭ್ಯಕ್ಕಾಗಿ ಒದಗಿಸಿರುವ ಅನುದಾನ ಸಂಪೂರ್ಣ ಬಳಕೆಯ ನಂತರ ಹೆಚ್ಚುವರಿ ಅನುದಾನಕ್ಕಾಗಿ ಪ್ರಸ್ತಾವನೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 393 ವೆಚ್ಚ–8/2024, ದಿನಾಂಕ: 01.06.2024ರ ಮತ್ತು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: PDS-HDD/35/2024, ದಿನಾಂಕ: 24.05.2024ರಲ್ಲಿ ನೀಡಲಾದ ಸಹಮತಿ ಹಾಗೂ ಆದೇಶ ಸಂಖ್ಯೆ: ಎಫ್.ಡಿ 2 ಟಿ.ಎಫ್.ಪಿ 2024, ದಿನಾಂಕ: 01.04.2024 ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

27/6/24
(ಬಿ.ಹೆಚ್.ಗಿರಿಜಾ)
ವಿಶೇಷಾಧಿಕಾರಿ ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ (ಯೋಜನೆ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.

**ಇವರಿಗೆ :**

1. ಮಹಾಲೇಖಪಾಲರು (ಆಡಿಟ್ 1 & 2), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.

3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), ಬೆಂಗಳೂರು.
6. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು.
7. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರಗಿ ವಿಭಾಗ.
8. ನಿರ್ದೇಶಕರು (ಪ್ರಾಥಮಿಕ / ಪ್ರೌಢ ಶಿಕ್ಷಣ), ಆಯುಕ್ತರ ಕಚೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
9. ನಿರ್ದೇಶಕರು, ಖಜಾನಾ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.
10. ಸರ್ಕಾರದ ಜಂಟಿ ಕಾರ್ಯದರ್ಶಿ–2, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಲೆಕ್ಕಾಧಿಕಾರಿಗಳು, ಆಯುಕ್ತರ ಕಚೇರಿ/ನಿರ್ದೇಶಕರ ಕಚೇರಿ, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), ರಾಜ್ಯ ಯೋಜನಾ ನಿರ್ದೇಶಕರ ಕಚೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
12. ಸಾಪ್ತಾಹಿಕ ರಾಜ್ಯ ಪತ್ರ/ಶಾಖಾರಕ್ಷ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ.

1. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು ರವರಿಗೆ ಸಲ್ಲಿಸುತ್ತಾ, ಮಾನ್ಯ ಸಚಿವರ ಅವಗಾಹನೆಗಾಗಿ ತರಲು ಕೋರಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಅಪರ ಕಾರ್ಯದರ್ಶಿ(ಆಡಳಿತ) ರವರ ಆಪ್ತ ಸಹಾಯಕರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಜಂಟಿ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನಸೌಧ, ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರ ಆಪ್ತ ಸಹಾಯಕರು, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.